ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ರಾಜ್ಯದಲ್ಲಿ ಡ್ರಗ್ಸ್ ಮಾರಾಟ ದಂಧೆಗೆ ಕಡಿವಾಣ ಹಾಕುವ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು) –

570 (511) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಡ್ರಗ್ಸ್ ಮಾರಾಟ ದಂಧೆ ಅವ್ಯಾಹತವಾಗಿ ನಡೆಯುತ್ತಿರುವುದು ಹಾಗೂ ಇದರಿಂದಾಗಿ ಹಲವಾರು ಬಾರಿ ಕಾನೂನು ಸುವ್ಯವಸ್ಥೆಗೆ ಭಂಗ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಡ್ರಗ್ಸ್ ಮಾರಾಟ ದಂಧೆ ಜಾಲವನ್ನು ಬೇಧಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ರಾಜ್ಯದಲ್ಲಿ 2018-19, 2019-20 ಮತ್ತು 2020-21ನೇ ಸಾಲಿನಲ್ಲಿ ಡ್ರಗ್ಸ್ ಮಾರಾಟ ದಂಧೆಯ ಎಷ್ಟು ಪ್ರಕರಣಗಳು ವರದಿಯಾಗಿವೆ;

(ಈ) ಕಳೆದ 3 ವರ್ಷಗಳಲ್ಲಿ ಡ್ರಗ್ಸ್ ಮಾರಾಟ ದಂಧೆಯಲ್ಲಿ ಭಾಗಿಯಾಗಿರುವ ಎಷ್ಟು ವಿದೇಶಿಯರ ವಿರುದ್ಧ ಪ್ರಕರಣಗಳು ದಾಖಲಾಗಿವೆ ; ಹಾಗೂ ಅಂಥವರ ವಿರುದ್ಧ ಕೈಗೊಂಡಿರುವ ಕ್ರಮಗಳೇನು?